# ಶೈಕ್ಷಣಿಕ ಅಭಿವೃದ್ಧಿ ತರಬೇತಿ ಕಾರ್ಯಕ್ರಮಕ್ಕೆ ಕೆಎಲ್ಎಸ್ ವಿಡಿಐಟಿ ಪ್ರಾಧ್ಯಾಪಕರು ಆಯ್ಕೆ

**ಕೊಂಕಣವಾಹಿನಿ ನ್ಯೂಸ್,**

**ಹಳಿಯಾಳ:** ಅಖಿಲ ಭಾರತ ತಾಂತ್ರಿಕ ಶಿಕ್ಷಣ ಮಂಡಳಿ(ಎಐಸಿಟಿಇ) ನವದೆಹಲಿಯು ಇಂಜಿನಿಯರಿಂಗ್ ಪ್ರಾಧ್ಯಾಪಕರ ಶೈಕ್ಷಣಿಕ ಅಭಿವೃದ್ಧಿಗಾಗಿ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಿದೆ.

ದೇಶದ ವಿವಿಧ ಐಐಟಿ, ಎನ್ಐಟಿ, ಐಐಐಟಿ ಸೇರಿದಂತೆ ಪ್ರತಿಷ್ಠಿತ ಸಂಸ್ಥೆಗಳಲ್ಲಿ ಪ್ರಾಧ್ಯಾಪಕರಿಗಾಗಿ ಶೈಕ್ಷಣಿಕ ಅಭಿವೃದ್ಧಿ ತರಬೇತಿ ನೀಡಲಾಗುತ್ತಿದೆ. ಭಾರತೀಯ ಮಾಹಿತಿ ತಂತ್ರಜ್ಞಾನ ಸಂಸ್ಥೆ ಧಾರವಾಡದ ತರಬೇತಿ ಕಾರ್ಯಕ್ರಮಕ್ಕೆ ಪಟ್ಟಣದ ಕೆಎಲ್ಎಸ್ ವಿಡಿಐಟಿ ಪ್ರಾಧ್ಯಾಪಕರು ಆಯ್ಕೆಯಾಗಿದ್ದಾರೆ.

ಮಹಾವಿದ್ಯಾಲಯದ ಸಿವಿಲ್ ವಿಭಾಗದ ಪ್ರೊ. ಲಕ್ಷ್ಮಿ ಹಟ್ಟಿ ಹೊಳಿ, ಪ್ರೊ. ವಿಜಯಲಕ್ಷ್ಮಿ ಬಿ ವಿ, ಮೆಕ್ಯಾನಿಕಲ್ ವಿಭಾಗದ ಡಾ. ಕೆ ಎಸ್ ಪೂಜಾರಿ, ಪ್ರೊ. ರಂಗನಾಥ ಪಾಟೀಲ್ , ಪ್ರೊ. ಗುರುರಾಜ ಸತ್ತಿಗೇರಿ. ಎಲೆಕ್ಟ್ರಾನಿಕ್ಸ್ ವಿಭಾಗದ ಪ್ರೊ. ರಾಘವೇಂದ್ರ ನಾಗರಳ್ಳಿ ಇವರುಗಳು ಸೈಬರ್ ಸುರಕ್ಷತೆ ಹಾಗೂ ಸೈಬರ್ ಫಿಸಿಕಲ್ ಸಿಸ್ಟಮ್ ಕುರಿತಾಗಿ ತರಬೇತಿಯನ್ನು ಪಡೆದು ಕೊಳ್ಳಲಿದ್ದಾರೆ.

ಎನ್ಐಟಿಕೆ ಸುರತ್ಕಲ್ ನೀಡುವ ಎಲೆಕ್ಟ್ರಿಕ್ ವೆಹಿಕಲ್‌ಗಳಿಗಾಗಿ ಬುದ್ಧಿವಂತ ಸಾರಿಗೆ ವ್ಯವಸ್ಥೆ ಕಾರ್ಯಕ್ರಮಕ್ಕೆ ಸಿವಿಲ್ ವಿಭಾಗದ ಪ್ರೊ. ಸೀಮಾ ಬಸರಿಕಟ್ಟಿ ಆಯ್ಕೆಯಾಗಿದ್ದಾರೆ.

ಪ್ರತಿಷ್ಠಿತ ಸಂಸ್ಥೆಗಳಲ್ಲಿ ಆಯೋಜಿಸಲಾಗಿರುವ ಕಾರ್ಯಕ್ರಮಕ್ಕೆ ಮಹಾವಿದ್ಯಾಲಯದ ಪ್ರಾಧ್ಯಾಪಕರು ಆಯ್ಕೆಯಾಗಿರುವುದು ಸಂತಸ ತಂದಿದೆ ಎಂದು ಆಡಳಿತ ಮಂಡಳಿ ಅಧ್ಯಕ್ಷ ಪ್ರಶಾಂತ ಕುಲಕರ್ಣಿ, ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ಹೇಳಿದ್ದಾರೆ. ಮೆಕ್ಯಾನಿಕಲ್ ವಿಭಾಗದ ಮುಖ್ಯಸ್ಥ ಡಾ. ಕೆ ಎಸ್ ಪೂಜಾರಿ, ಸಿವಿಲ್ ವಿಭಾಗದ ಮುಖ್ಯಸ್ಥ ಡಾ. ಆಶಿಕ್ ಬಳ್ಳಾರಿ, ಇಲೆಕ್ಟ್ರಾನಿಕ್ ವಿಭಾಗ ಮುಖ್ಯಸ್ಥ ಡಾ ಮಹೇಂದ್ರ ದೀಕ್ಷಿತ್ ಮತ್ತು ಎಲ್ಲ ಸಿಬ್ಬಂದಿ ಹರ್ಷ ವ್ಯಕ್ತಪಡಿಸಿದ್ದಾರೆ.